# ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ

(ಸರ್ಕಾರಿ ಆದೇಶ ಸಂಖ್ಯೆ:ಮಮಇ:271:ಪಿಹೆಚ್‌ಪಿ:2013 ಬೆಂಗಳೂರು ದಿ:03.09.2013)

**ಪೀಠಿಕೆ:**

ಎಸ್.ಎಸ್.ಎಲ್.ಸಿ. ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿಕಲಚೇತನ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ, ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯು ದಿನಾಂಕ:03-09-2013ರಿಂದ ಜಾರಿಗೆ ಬಂದಿರುತ್ತದೆ. ಭರ್ತಿಮಾಡಿದ ಅರ್ಜಿಯನ್ನು ಪ್ರಾಂಶುಪಾಲರ ದೃಢೀಕರಣದೊಂದಿಗೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಆಯಾ ವರ್ಷದೊಳಗೆ ಸಲ್ಲಿಸತಕ್ಕದ್ದು.

**ಷರತ್ತುಗಳು:**

- ವಿಕಲಚೇತನರು ಭಾರತದ ಪ್ರಜೆಯಾಗಿದ್ದು, ಅರ್ಜಿ ಸಲ್ಲಿಸುವ ದಿನಾಂಕಕ್ಕೆ ಕನಿಷ್ಠ 5 ವರ್ಷ ಕರ್ನಾಟಕದಲ್ಲಿ ವ್ಯಾಸಂಗ ಮಾಡಿರತಕ್ಕದ್ದು.
- ಸರ್ಕಾರಿ, ಸ್ಥಳೀಯ ಸಂಸ್ಥೆ, ಅನುದಾನಿತ ಸಂಸ್ಥೆ, ಸರ್ಕಾರದ ಮಾನ್ಯತೆ ಪಡೆದ ಅನುದಾನ ಸಹಿತ ಮತ್ತು ಅನುದಾನ ರಹಿತ ಖಾಸಗಿ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್.ಎಸ್.ಎಲ್.ಸಿ ನಂತರದ ವಿಕಲಚೇತನ ವಿದ್ಯಾರ್ಥಿಗಳು ಶುಲ್ಕ ಮರು ಪಾವತಿ ಪಡೆಯಲು ಅರ್ಹರಿರುತ್ತಾರೆ.
- ಯಾವ ಸಂಸ್ಥೆಗಳು ವಿಕಲಚೇತನ ವಿದ್ಯಾರ್ಥಿಗಳಿಗೆ ಶುಲ್ಕವನ್ನು ವಿಧಿಸುವುದಿಲ್ಲವೋ ಅಂತಹ ಸಂಸ್ಥೆಯ ವಿದ್ಯಾರ್ಥಿಗಳು ಶುಲ್ಕ ಮರುಪಾವತಿಗೆ ಅರ್ಹರಿರುವುದಿಲ್ಲ.
- ವಿಕಲಚೇತನ ವಿದ್ಯಾರ್ಥಿಗಳು ಹಿಂದಿನ ವರ್ಷದ ಪಬ್ಲಿಕ್ ಪರೀಕ್ಷೆಯಲ್ಲಿ ಎಲ್ಲಾ ವಿಷಯಗಳಲ್ಲಿ ಉತ್ತೀರ್ಣರಾಗದಿದ್ದಲ್ಲಿ ಮುಂದಿನ ವರ್ಷದಲ್ಲಿ ಶುಲ್ಕ ಮರುಪಾವತಿಗೆ ಅರ್ಹರಾಗುವುದಿಲ್ಲ. ಆದರೆ, ಮುಂದಿನ ಶೈಕ್ಷಣಿಕ ವರ್ಷದಲ್ಲಿ ಹಿಂದಿನ ಬಾಕಿ ವಿಷಯಗಳು ಸೇರಿದಂತೆ ಎಲ್ಲಾ ವಿಷಯಗಳಲ್ಲಿ ಉತ್ತೀರ್ಣರಾಗಿದ್ದಲ್ಲಿ ಮಾತ್ರ ನಂತರದ ವರ್ಷದಲ್ಲಿ ಶುಲ್ಕ ಮರುಪಾವತಿಗೆ, ಆ ಕೋರ್ಸ್‌ಗಳಲ್ಲಿ ಕ್ಯಾರಿ ಓವರ್ ಪದ್ಧತಿ ಜಾರಿಯಿದ್ದು ಮುಂದಿನ ತರಗತಿಗೆ/ವರ್ಷಕ್ಕೆ ಪ್ರವೇಶ ಅವಕಾಶವಿದ್ದಲ್ಲಿ ಅಂತಹವರು ಶುಲ್ಕ ಮರುಪಾವತಿಗೆ ಅರ್ಹರಿರುತ್ತಾರೆ.
- ಪರೀಕ್ಷಾ ಶುಲ್ಕವನ್ನು ವರ್ಷಕ್ಕೆ ಒಂದು ಸಲ ಮಾತ್ರ ಮರುಪಾವತಿಸಲಾಗುವುದು. ಅನುತ್ತೀರ್ಣರಾದ ಅಭ್ಯರ್ಥಿಗಳು ಹಾಗೂ ಸಪ್ಲಿಮೆಂಟರಿ ಪರೀಕ್ಷೆ ತೆಗೆದುಕೊಳ್ಳುವ ಅಭ್ಯರ್ಥಿಗಳು ಶುಲ್ಕ ಮರುಪಾವತಿಗೆ ಅರ್ಹರಾಗುವುದಿಲ್ಲ.
- ಬೇರೆ ಇಲಾಖೆ ಹಾಗೂ ಇತರೆ ಮೂಲಗಳಿಂದ ಶುಲ್ಕವನ್ನು ಪಡೆದ ವಿದ್ಯಾರ್ಥಿಗಳಿಗೆ ಈ ಯೋಜನೆಯಡಿ ಶುಲ್ಕ ಮರುಪಾವತಿಗೆ ಅವಕಾಶವಿರುವುದಿಲ್ಲ.
- ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯ ಮಿತಿ ಇರುವುದಿಲ್ಲ.
- ವಿದ್ಯಾರ್ಥಿಯು ವ್ಯಾಸಂಗ ಮಾಡುವ ಅವಧಿಯಲ್ಲಿ 2ನೇ ವರ್ಷದಿಂದ ನೀಡುವಾಗ ಹಿಂದಿನ ವರ್ಷದಲ್ಲಿ ಕನಿಷ್ಠ ಶೇ.80ರಷ್ಟು ಹಾಜರಾತಿ ಹೊಂದಿರಬೇಕು.
- ಅಂಗವಿಕಲರ ಅಧಿನಿಯಮದಲ್ಲಿ ಸೂಚಿಸಿರುವ ಹಾಗೂ ವೈದ್ಯಕೀಯ ಮಂಡಳಿಯವರು ಶಿಫಾರಸ್ಸು ಮಾಡಿರುವ ವೈದ್ಯಕೀಯ ಪ್ರಮಾಣ ಪತ್ರದಲ್ಲಿ ಸೂಚಿಸಿರುವ ವಿಕಲಚೇತನ ಅಭ್ಯರ್ಥಿಗಳು ಮಾತ್ರ ಯೋಜನೆಗೆ ಅರ್ಹರಿರುತ್ತಾರೆ.